ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ,
ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 24–10–2019

# ಪತ್ರಿಕಾ ಆಮಂತ್ರಣ

1. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು, ಕೃಷಿ, ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಅರಣ್ಯ ಪಶುಸಂಗೋಪನೆ, ಮೀನುಗಾರಿಕೆ, ಕೃಷಿ ಮಾರುಕಟ್ಟೆ, ಗ್ರಾಮೀಣಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ **"ಕೃಷಿಮೇಳ – 2019"**

   ಪ್ರಶಸ್ತಿ ಪ್ರದಾನ ಸಮಾರಂಭ"

   ಗೌರವಾನ್ವಿತ ಅತಿಥಿಗಳು:

   ಶ್ರೀ ಲಕ್ಷಣ್ ಸಂಗಪ್ಪ ಸವದಿ, ಉಪ ಮುಖ್ಯಮಂತ್ರಿ
   ಸಾರಿಗೆ ಹಾಗೂ ಕೃಷಿ ಸಚಿವರು, ಕರ್ನಾಟಕ ಸರ್ಕಾರ ಮತ್ತು ಸಹ ಕುಲಾಧಿಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.

   ಅಧ್ಯಕ್ಷತೆ:

   ಎಸ್. ರಾಜೇಂದ್ರ ಪ್ರಸಾದ್,
   ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

   ದಿನಾಂಕ: 25–11–2019 ಶುಕ್ರವಾರ, ಸಮಯ: ಮಧ್ಯಾಹ್ನ 2.00 ಗಂಟೆಗೆ

   ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ.) ಬೆಂಗಳೂರು.

   ವಿ.ಸೂ: ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕಬ್ಬನ್ ಉದ್ಯಾನವನದಲ್ಲಿರುವ ಬೆಂಗಳೂರು ಪ್ರೆಸ್ ಕ್ಲಬ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

   ಸಂಪರ್ಕ: ಡಾ. ಕೆ. ಶಿವರಾಮು ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು
   ಮೊಬೈಲ್ ನಂ. 9972035456
   ಡಾ. ಎಂ.ಎ. ಮೂರ್ತಿ, ಸಹಾಯಕ ಪ್ರಾಧ್ಯಾಪಕರು (ಗುತ್ತಿಗೆ)

ಮೊಬೈಲ್ ಸಂಖ್ಯೆ  : 9535355329
ಶ್ರೀ ಶ್ರೀನಿವಾಸಪ್ಪ, ವಾಹನ ಚಾಲಕರು
ಮೊಬೈಲ್ ಸಂಖ್ಯೆ : 944949314

# ಪತ್ರಿಕಾ ಪ್ರಕಟಣೆ

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 24 (ಕರ್ನಾಟಕ ವಾರ್ತೆ)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಕಾಲ ಹಾಗೂ ಕಾರ್ಮಿಕ ಸಚಿವರು ಆದ ಶ್ರೀ ಎಸ್. ಸುರೇಶ್‌ಕುಮಾರ್ ಅವರು ಅಕ್ಟೋಬರ್ 25 ರಂದು ಮಂಡ್ಯ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅಂದೇ ದಿನ ನಗರಕ್ಕೆ ಹಿಂದಿರುಗಲಿದ್ದಾರೆ.

## ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶ – 2019
## ಜಿಲ್ಲಾ ಮಟ್ಟದ ಶಿಕ್ಷಕರ ತರಬೇತಿ ಕಾರ್ಯಾಗಾರ

ಬೆಂಗಳೂರು, ಅಕ್ಟೋಬರ್ 24 (ಕರ್ನಾಟಕ ವಾರ್ತೆ)

ಬೆಂಗಳೂರು ನಗರ (ಉತ್ತರ) ಜಿಲ್ಲಾ ವ್ಯಾಪ್ತಿಯಲ್ಲಿರುವ ಆಸಕ್ತ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ ಶಿಕ್ಷಕರು ಹಾಗೂ ಪ್ರೌಢಶಾಲಾ ಶಿಕ್ಷಕರಿಗಾಗಿ ಅಕ್ಟೋಬರ್ 25 ರಂದು ರಾಷ್ಟ್ರೀಯ ಮಕ್ಕಳ ವಿಜ್ಞಾನ ಅಂಗವಾಗಿ ಯೋಜನೆಗಳನ್ನು ಸಿದ್ಧಪಡಿಸುವ ಹಾಗೂ ಸಮರ್ಪಕವಾಗಿ ಮಂಡಿಸಲು ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಿದೆ.  ಈ ಕಾರ್ಯಾಗಾರದಲ್ಲಿ ಭಾಗವಹಿಸುವ ಕುರಿತು ಈಗಾಗಲೇ ಬೆಂಗಳೂರು ನಗರ (ಉತ್ತರ) ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಆದೇಶ ಹೊರಡಿಸಿರುತ್ತಾರೆ.

ಪ್ರೋ. ಸೇತುರಾವ್ ಸಭಾಂಗಣ, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ವಿಜ್ಞಾನ ಭವನ, ನಂ 24/2, 21 ನೇ ಮುಖ್ಯರಸ್ತೆ, ಬನಶಂಕರಿ, 2ನೇ ಹಂತ, ಬೆಂಗಳೂರು.

ಆಸಕ್ತ ಶಿಕ್ಷಕರು ಕಾರ್ಯಾಗಾರದಲ್ಲಿ ಭಾಗವಹಿಸಲು ಅಥವಾ ಹೆಚ್ಚಿನ ಮಾಹಿತಿಗಾಗಿ ಶ್ರೀ ಬಿ.ಎನ್. ಶ್ರೀನಾಥ್ ಮೊಬೈಲ್ ಸಂಖ್ಯೆ 9845458697 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.